## ಕರ್ನಾಟಕ ಸರ್ಕಾರ

ಸಂಖ್ಯೆ: RDPR/10/GPA/2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹು ಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:28-06-2022.

**ಇವರಿಂದ:**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

**ಇವರಿಗೆ:**

1. ಆಯುಕ್ತರು,
   ಪಂಚಾಯತ್ ರಾಜ್ ಆಯುಕ್ತಾಲಯ,
   ಬೆಂಗಳೂರು.

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
   ಎಲ್ಲಾ ಜಿಲ್ಲಾ ಪಂಚಾಯಿತಿಗಳು.

ಮಾನ್ಯರೆ,

**ವಿಷಯ:** ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿನ ಒಂದು ಎಕರಗಿಂತ ಕಡಿಮೆ ಇರುವ ಪ್ರದೇಶ ಮತ್ತು ಏಕನಿವೇಶನ ವಸತಿ / ವಸತಿಯೇತರಗಾಗಿ ಭೂ ಪರಿವರ್ತಿತ ಜಮೀನುಗಳಲ್ಲಿನ ವಿನ್ಯಾಸ ಅನುಮೋದನೆ ಪಡೆಯುವ ಬಗ್ಗೆ.

**ಉಲ್ಲೇಖ:**
1) ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 886 ಗ್ರಾಪಂಅ 2014 ದಿನಾಂಕ: 11-11-2014.
2) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 132 ಗ್ರಾಪಂಅ 2015 ದಿನಾಂಕ: 19-03-2015.
3) ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆ ಸಂಖ್ಯೆ: DPAL 36 SHASANA 2021, DATED:07-10-2021.
4) ಸರ್ಕಾರದ ಇದೇ ಸಮಸಂಖ್ಯೆಯ ಪತ್ರ ದಿನಾಂಕ:28-02-2022.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (4) ರ ಪತ್ರದಲ್ಲಿ ಗ್ರಾಮ ಪಂಚಾಯತಿಗಳು ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿನ ಒಂದು ಎಕರಗಿಂತ ಕಡಿಮೆ ಇರುವ ಪ್ರದೇಶ ಮತ್ತು ಏಕನಿವೇಶನ ವಸತಿ / ವಸತಿಯೇತರಗಾಗಿ ಭೂ ಪರಿವರ್ತಿತ ಜಮೀನುಗಳಲ್ಲಿನ ವಿನ್ಯಾಸ ಅನುಮೋದನೆಗಾಗಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅನುಮೋದನೆ ಪಡೆದು ಕ್ರಮ ವಹಿಸುವಂತೆ ತಿಳಿಸಲಾಗಿತ್ತು. ಪ್ರಸ್ತುತ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961 ರ ಪ್ರಕರಣ 4 (k) ಗೆ ಸಂಬಂಧಿಸಿದಂತೆ ಇದುವರೆವಿಗೂ ನಿಯಮಗಳನ್ನು ರಚಿಸದಿರುವುದರಿಂದ ನಿಯಮಗಳನ್ನು ರಚಿಸುವವರೆಗೆ **ದಿನಾಂಕ:28-02-2022 ರ ಪತ್ರವನ್ನು ಹಿಂಪಡೆಯಲಾಗಿದೆ.**

ಮುಂದುವರೆದು, ಉಲ್ಲೇಖ (1) ಮತ್ತು (2) ರಂತೆ ಸ್ಥಳೀಯ ಯೋಜನಾ ಪ್ರದೇಶದ ಹೊರಗಡೆ ಭೂ ಪರಿವರ್ತಿತ ಜಮೀನುಗಳಲ್ಲಿ ಬಡಾವಣೆಗಾಗಿ ವಿನ್ಯಾಸ ಅನುಮೋದನೆ ಮಾಡಲು ಅನುಸರಿಸಬೇಕಾದ ವಿಧಾನಗಳ ಬಗ್ಗೆ ಕೈಪಿಡಿ ಮತ್ತು ಸುತ್ತೋಲೆಯಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಅದರಂತೆ ತಾಲ್ಲೂಕು ಪಂಚಾಯತಿಗಳು ಮತ್ತು ಗ್ರಾಮ ಪಂಚಾಯತಿಗಳು ಕ್ರಮ ವಹಿಸುವಂತೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

B. Naveenkumar 28/06/2022
**(ನವೀನ್ ಕುಮಾರ್. ಬಿ)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ, (ಗ್ರಾ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

28/6/22

**<u>ಪ್ರತಿ ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ:</u>**

1) ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು.
3) ನಿರ್ದೇಶಕರು, (ಇ-ಆಡಳಿತ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4) ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
5) ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
6) ಇಲಾಖಾ ವೆಬ್‌ಸೈಟ್ ನಲ್ಲಿ ಅಳವಡಿಸಲು.